**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ. ಎ. ತಿಪ್ಪೇಸ್ವಾಮಿ ಹಾಗೂ ಟಿ. ಎ. ಶರವಣ ರವರು ನಿಯಮ-330 ರಡಿಯಲ್ಲಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆ:**

**ಸೂಚನೆ:-**

ನ್ಯಾಯಮೂರ್ತಿ ಎ.ಜೆ. ಸದಾಶಿವ ಆಯೋಗ ನೀಡಿರುವ ಶಿಫಾರಸ್ಸಿನನ್ವಯ ರಾಜ್ಯದಲ್ಲಿರುವ ಪರಿಶಿಷ್ಟ ಜಾತಿಗಳ ಒಳಮೀಸಲಾತಿ ಜಾರಿಗೊಳಿಸಲು ಒತ್ತಾಯಿಸಿ, ಪರಿಶಿಷ್ಟ ಜಾತಿಗಳ ಮೀಸಲಾತಿ ಜಾರಿ, ರಾಜ್ಯ ಸಮಿತಿ ಕಳೆದ ಹಲವಾರು ವರ್ಷಗಳಿಂದ ಹೋರಾಟ ನಡೆಸುತ್ತಾರೆ. ಅಲ್ಲದೇ, ಈ ಆಯೋಗದ ಶಿಫಾರಸ್ಸು ಜಾರಿಗೊಳಿಸಲು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ರಾಜ್ಯಸಮಿತಿ ಸತ್ಯಾಗ್ರಹ ನಡೆಸಿ, ಹೋರಾಟ ನಡೆಸುತ್ತಿದೆ. ನ್ಯಾಯಮೂರ್ತಿ ಎ.ಜೆ.ಸದಾಶಿವ ಆಯೋಗ ತನ್ನ ವರದಿಯನ್ನು ದಿನಾಂಕ:12-06-2012 ರಂದು ರಾಜ್ಯ ಸರ್ಕಾರಕ್ಕೆ ಸಲ್ಲಿಸಿದ್ದರು. ಈ ವರದಿಯಲ್ಲಿರುವ ಶಿಫಾರಸ್ಸಿನನ್ವಯ ಪರಿಶಿಷ್ಟ ಉಪ-ಜಾತಿಗಳ ಒಳಮೀಸಲಾತಿ ಒದಗಿಸಲು ಅಗತ್ಯವಿರುವ ತಿದ್ದುಪಡಿಗಳನ್ನು ಸಂವಿಧಾನದ ಪರಿಚ್ಛೇದ 341(3) ತರಲು ಕೇಂದ್ರ ಸರ್ಕಾರಕ್ಕೆ ಯಾವುದೇ ಪ್ರಸ್ತಾವನೆಯನ್ನು ಕಳುಹಿಸಿರುವುದಿಲ್ಲ. ಈ ಮಧ್ಯೆ ರಾಜ್ಯ ಸರ್ಕಾರ ಪರಿಶಿಷ್ಟ ಸಮುದಾಯದ ಉಪ-ಜಾತಿಗಳ ಒಳಮೀಸಲಾತಿ ನೀಡಲು ಕಾನೂನು ಸಚಿವರ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟದ ಉಪ-ಸಮಿತಿಯನ್ನು ರಚಿಸಬೇಕು.

ಅಲ್ಲದೇ, ನ್ಯಾಯಮೂರ್ತಿ ನಾಗಮೋಹನ್ ದಾಸ್ ಆಯೋಗದ ಶಿಫಾರಸ್ಸಿನ ಅನ್ವಯ ಪರಿಶಿಷ್ಟ ಜಾತಿಗಳ ಮೀಸಲಾತಿಯನ್ನು ಶೇ.15 ರಿಂದ18 ರವರೆಗೆ ಮತ್ತು ಪರಿಶಿಷ್ಟ ಪಂಗಡದ ಮೀಸಲಾತಿಯನ್ನು ಶೇ.3 ರಿಂದ 7 ರವರೆಗೆ ಹೆಚ್ಚಿಸಲಾಗಿದೆ. ಆದರೆ, ರಾಜ್ಯಸರ್ಕಾರ ಈ ಬಗ್ಗೆ ಸೂಕ್ತ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸದೇ, ಈ ವಿಷಯವನ್ನು ನೆನೆಗುದಿಗೆ ಬೀಳಿಸಿದೆ. ಸಾರ್ವಜನಿಕ ಮಹತ್ವದ ಈ ವಿಷಯವನ್ನು ಸದನದಲ್ಲಿ ಪ್ರಸ್ತಾಪಿಸಲು ಅವಕಾಶ ಮಾಡಿಕೊಡಬೇಕೆಂದು ಕೋರುತ್ತೇವೆ.

**ಉತ್ತರ:-**

ಪರಿಶಿಷ್ಟ ಜಾತಿಗಳ ವರ್ಗೀಕರಣದ (ಒಳಮೀಸಲಾತಿ) ಕುರಿತು ಪರಿಶೀಲಿಸಿ ಸೂಕ್ತ ಶಿಫಾರಸ್ಸುಗಳನ್ನು ಮಾಡಲು ಮಾನ್ಯ ಕಾನೂನು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟದ ಉಪಸಮಿತಿಯ ದಿನಾಂಕ:13-12-2022 ರಂದು ರಚಿಸಲಾಗಿದ್ದು, ಸದರಿ ಸಮಿತಿಯ ಮೊದಲನೇ ಸಭೆಯು ದಿನಾಂಕ:17-12-2022 ರಂದು ನಡೆದಿರುತ್ತದೆ. ಸಮಿತಿಯ ವರದಿಯನ್ನು ನಿರೀಕ್ಷಿಸಲಾಗಿದೆ.

ಮೀಸಲಾತಿ ಹೆಚ್ಚಿಸುವ ಬಗ್ಗೆ 2011ರ ಜನಗಣತಿಯ ಆಧಾರದ ಮೇಲೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನರ ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿಯನ್ನು ಹೆಚ್ಚಿಸಬೇಕೆನ್ನುವ ಬೇಡಿಕೆಯಂತೆ ಮಾನ್ಯ ಕರ್ನಾಟಕ ಉಚ್ಛನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಜಸ್ಟೀಸ್ ಹೆಚ್. ಎನ್. ನಾಗಮೋಹನದಾಸ್ ಇವರ ಅಧ್ಯಕ್ಷತೆಯಲ್ಲಿ ದಿನಾಂಕ:11-10-2019 ರಂದು ಏಕಸದಸ್ಯ ಸಮಿತಿಯನ್ನು ರಚಿಸಲಾಗಿತ್ತು. ಸದರಿ ಸಮಿತಿಯು ಮೀಸಲಾತಿ ಹೆಚ್ಚಿಸುವ ಬಗ್ಗೆ ಅಧ್ಯಯನ ನಡೆಸಿ ದಿನಾಂಕ:02.07.2020ರಂದು ಸರ್ಕಾರಕ್ಕೆ ವರದಿ ಸಲ್ಲಿಸಿರುತ್ತಾರೆ. ಸದರಿ ವರದಿಯಲ್ಲಿ ಪರಿಶಿಷ್ಟ ಜಾತಿಗೆ ಶೇ.15 ರಿಂದ ಶೇ.17ಕ್ಕೆ ಮತ್ತು ಪರಿಶಿಷ್ಟ ಪಂಗಡಕ್ಕೆ ಶೇ.3 ರಿಂದ ಶೇ.7 ಕ್ಕೆ ಹೆಚ್ಚಿಸಲು ಶಿಫಾರಸ್ಸು ಮಾಡಿದ್ದರು. ಮೀಸಲಾತಿ ಹೆಚ್ಚಿಸುವುದನ್ನು ರಕ್ಷಣೆ ಮಾಡಲು ಸದರಿ ವಿಧೇಯಕವನ್ನು ಭಾರತ ಸಂವಿಧಾನದ ಷೆಡ್ಯೂಲ್-9 ರಲ್ಲಿ ಸೇರಿಸಲು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಸದರಿ ವರದಿಯನ್ನು ಪರಾಮರ್ಶಿಸಲು ದಿನಾಂಕ:25-11-2020 ರಂದು ಸಮಾಜ ಕಲ್ಯಾಣ ಸಚಿವರ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪಸಮಿತಿಯನ್ನು ರಚಿಸಲಾಗಿದೆ. ಆದರೆ ಸಚಿವ ಸಂಪುಟ ಉಪಸಮಿತಿ ಅಂತಿಮ ವರದಿಯನ್ನು ನೀಡಿರುವುದಿಲ್ಲ. ಈಮಧ್ಯ ಕುರುಬ ಸಮುದಾಯದವರು ಪ್ರಸ್ತುತ ಹಿಂದುಳಿದ ವರ್ಗಗಳ ಪ್ರವರ್ಗ 2ಎ ದಿಂದ ಪರಿಶಿಷ್ಟ ಪಂಗಡಕ್ಕೆ ಸೇರಿಸಲು ಕೋರಿರುತ್ತಾರೆ. ಪಂಚಮಸಾಲಿ ಲಿಂಗಾಯತ ಸಮುದಾಯದವರು ಹಿಂದುಳಿದ ವರ್ಗಗಳ ಪ್ರವರ್ಗ-3ಬಿ ಯಿಂದ ಪ್ರವರ್ಗ-2ಎ ಗೆ ವರ್ಗಾಯಿಸಲು ಒತ್ತಾಯಿಸುತ್ತಿದ್ದಾರೆ. ಅದೇ ರೀತಿ ವೀರಶೈವ ಲಿಂಗಾಯತರು ಮತ್ತು ಒಕ್ಕಲಿಗ ಸಮುದಾಯದವರು ಕೇಂದ್ರ ಸರ್ಕಾರದ ಇತರ ಹಿಂದುಳಿದ ವರ್ಗಗಳಪಟ್ಟಿ (OBC)ಗೆ ಸೇರಿಸಲು ಕೋರಿರುತ್ತಾರೆ.

ಆದ್ದರಿಂದ, ನಿವೃತ್ತ ನ್ಯಾಯಾಧೀಶರಾದ ಜಸ್ಟೀಸ್ ಹೆಚ್. ಎನ್. ನಾಗಮೋಹನದಾಸ್ ವರದಿಯನ್ನು ಅನುಷ್ಠಾನ ಮಾಡುವ ಬಗ್ಗೆ ವರದಿ ನೀಡಲು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಮೂರ್ತಿಗಳಾದ ಶ್ರೀ ಸುಭಾಷ ಆಡಿ ರವರ ಅಧ್ಯಕ್ಷತೆಯಲ್ಲಿ 03 ಸದಸ್ಯರುಗಳ ಸಮಿತಿಯನ್ನು ರಚಿಸಲಾಗಿತ್ತು. ಸದರಿ ತ್ರಿಸದಸ್ಯರ ಸಮಿತಿಯು ಮೀಸಲಾತಿ ಹೆಚ್ಚಿಸುವ ಬಗ್ಗೆ ಸಮ್ಮತಿಸಿ ವರದಿಯನ್ನು ನೀಡಿರುತ್ತಾರೆ. ಅದರಂತೆ, ಸರ್ಕಾರವು ಪರಿಶಿಷ್ಟ ಜಾತಿಗೆ ಶೇ.15 ರಿಂದ ಶೇ.17ಕ್ಕೆ ಹಾಗೂ ಪರಿಶಿಷ್ಟ ಪಂಗಡದ ಮೀಸಲಾತಿಯನ್ನು ಶೇ.3 ರಿಂದ ಶೇ.7ಕ್ಕೆ ಹೆಚ್ಚಿಸಿ ದಿನಾಂಕ:23.10.2022 ರಂದು ಸುಗ್ರೀವಾಜ್ಞೆಯನ್ನು ಹೊರಡಿಸಿ ದಿನಾಂಕ:01.11.2022 ರಿಂದ ಜಾರಿಗೆ ಬರುವಂತೆ ಅಧಿಸೂಚನೆಯನ್ನು ಹೊರಡಿಸಲಾಗಿರುತ್ತದೆ. ಸದರಿ ಸುಗ್ರೀವಾಜ್ಞೆಯಂತೆ, ಪ್ರಸಕ್ತ ನಡೆಯುತ್ತಿರುವ ಚಳಿಗಾಲದ ಅಧಿವೇಶನದಲ್ಲಿ ವಿಧೇಯಕವನ್ನು ಮಂಡಿಸಲಾಗಿದೆ.

ಸದರಿ ವಿಧೇಯಕವು ಕಾಯ್ದೆಯಾದ ನಂತರ ಭಾರತ ಸಂವಿಧಾನದ ಷೆಡ್ಯೂಲ್-9 ರಲ್ಲಿ ಸೇರಿಸುವ ಬಗ್ಗೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವ ಕುರಿತು ಪ್ರತ್ಯೇಕವಾಗಿ ಕ್ರಮ ಜರುಗಿಸುವ ಬಗ್ಗೆ ಪರಿಶೀಲಿಸಲಾಗುವುದು.

**ಸಕಇ 804 ಎಸ್‌ಎಲ್‌ಪಿ 2022**

**(ಕೋಟ ಶ್ರೀನಿವಾಸ ಪೂಜಾರಿ)**
**ಸಮಾಜ ಕಲ್ಯಾಣ ಹಾಗೂ ಹಿಂದುಳಿದ**
**ವರ್ಗಗಳ ಕಲ್ಯಾಣ ಸಚಿವರು**

61 330